## ಮೊದಲನೇ ಪುಟದಿಂದ

# ಉಪನೋಂದಣಿ ಕಚೇರಿಗಳು ತೆರೆಯಲಿವೆ

**ಕಾರ್ಯನಿರ್ವಹಿಸುವ ಕಚೇರಿಗಳು ಹೀಗಿವೆ :** ಬಸವನಗುಡಿ ಉಪನೋಂದಣಾಧಿಕಾರಿ ಕಚೇರಿ ಬಸವನಗುಡಿ, ಗಾಂಧಿನಗರ, ಜಯನಗರ, ರಾಜಾಜಿನಗರ-ಮಾದನಾಯಕನಹಳ್ಳಿ, ಶಿವಾಜಿನಗರ, ಬೆಂಗಳೂರು ಗ್ರಾಮಾಂತರ-ದೇವನಹಳ್ಳಿ, ಚಿತ್ರದುರ್ಗ, ಚಿಕ್ಕಬಳ್ಳಾಪುರ-ಬಾಗೇಪಲ್ಲಿ, ದಾವಣಗೆರೆ, ರಾಮನಗರ, ಶಿವಮೊಗ್ಗ, ತುಮಕೂರು-ಕುಣಿಗಲ್, ಕೋಲಾರ, ಬೆಳಗಾವಿ-ಮೂಡಲಗಿ, ಬಾಗಲಕೋಟೆ-ಇಳಕಲ್, ಧಾರವಾಡ-ಹುಬ್ಬಳ್ಳಿ ಉತ್ತರ, ಗದಗ-ಗಜೇಂದ್ರಗಡ, ಕಾರವಾರ/ಉತ್ತರ ಕನ್ನಡ- ಕುಮಟಾ, ಹಾವೇರಿ, ವಿಜಯಪುರ, ಚಾಮರಾಜನಗರ- ಕುದೇರು, ಹಾಸನ-ಸಕಲೇಶಪುರ, ಕೊಡಗು-ಮಡಿಕೇರಿ, ಚಿಕ್ಕಮಗಳೂರು, ದಕ್ಷಿಣಕನ್ನಡ-ಮಂಗಳೂರು ಸಿಟಿ, ಮಂಡ್ಯ-ಮಳವಳ್ಳಿ, ಮೈಸೂರು-ಮೈಸೂರು ದಕ್ಷಿಣ, ಉಡುಪಿ, ಕೊಪ್ಪಳ-ಗಂಗಾವತಿ, ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ, ಬಳ್ಳಾರಿ, ವಿಜಯನಗರ-ಹೂವಿನಹಡಗಲಿ.

# ಬಿಜೆಪಿಯಿಂದ ಉಚ್ಚಾಟನೆ

ಹೀಗಾಗಿ ಇವರ ವಿರುದ್ಧ ರಾಜ್ಯ ಬಿಜೆಪಿ ಹೈಕಮಾಂಡ್‌ಗೆ ದೂರು ನೀಡಿತ್ತು. ಇಬ್ಬರಿಗೆ ಶೋಕಾಸ್ ನೋಟಿಸ್ ಸಹ ಜಾರಿ ಮಾಡಲಾಗಿತ್ತು. ಅಂತಿಮವಾಗಿ ಎಸ್.ಟಿ. ಸೋಮಶೇಖರ್ ಮತ್ತು ಶಿವರಾಮ್ ಹೆಬ್ಬಾರ್ ಅವರನ್ನು ಉಚ್ಚಾಟಿಸಿ ಬಿಜೆಪಿ ಕೇಂದ್ರೀಯ ಶಿಸ್ತು ಸಮಿತಿ ಸದಸ್ಯ ಕಾರ್ಯದರ್ಶಿ ಓಂ ಪಾಠಕ್ ಅವರು ಆದೇಶ ಮಾಡಿದ್ದಾರೆ.

ಇಬ್ಬರು ಶಾಸಕರಿಗೂ 2025ರ ಮಾರ್ಚ್ 25ರಂದು ನೋಟಿಸ್ ನೀಡಿ ಎಚ್ಚರಿಸಲಾಗಿತ್ತು. ಇಬ್ಬರು ಪದೇ, ಪದೇ ಪಕ್ಷದ ಶಿಸ್ತು ಉಲ್ಲಂಘನೆ ಮಾಡುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿ ಉಚ್ಚಾಟನೆ ಮಾಡಲಾಗಿದೆ. ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಇಬ್ಬರನ್ನು ತಕ್ಷಣ ಜಾರಿಗೆ ಬರುವಂತೆ 6 ವರ್ಷಗಳ ಅವಧಿಗೆ ಉಚ್ಚಾಟನೆ ಮಾಡಲಾಗಿದೆ. ಈಗ ಹೊಂದಿರುವ ಯಾವುದೇ ಪಕ್ಷದ ಹುದ್ದೆಯಿಂದ ಅವರನ್ನು ತೆಗೆದು ಹಾಕಲಾಗಿದೆ ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ.

ಬೆಂಗಳೂರಿನ ಯಶವಂತಪುರ ಕ್ಷೇತ್ರದ ಶಾಸಕ ಎಸ್.ಟಿ.ಸೋಮಶೇಖರ್ ಹಾಗೂ ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ಕ್ಷೇತ್ರದ ಶಾಸಕ ಶಿವರಾಮ್ ಹೆಬ್ಬಾರ್ ಈ ಹಿಂದೆ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ್ದರು. ಬಿಜೆಪಿ ಸರ್ಕಾರದ ಅವಧಿಯಲ್ಲಿ ಶಿವರಾಮ್ ಹೆಬ್ಬಾರ್ ಕಾರ್ಮಿಕ ಸಚಿವರಾಗಿ ಹಾಗೂ ಸೋಮಶೇಖರ್ ಸಹಕಾರ ಸಚಿವರಾಗಿ ಕಾರ್ಯನಿರ್ವಹಿಸಿದ್ದರು.

2023ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯಿಂದ ಸ್ಪರ್ಧಿಸಿ ಗೆದ್ದಿದ್ದರು. ಆದರೆ ನಂತರದಲ್ಲಿ ಇಬ್ಬರೂ ಶಾಸಕರು ಕಾಂಗ್ರೆಸ್ ಪಕ್ಷದ ಜೊತೆ ಹೆಚ್ಚು ಗುರುತಿಸಿಕೊಳ್ಳುತ್ತಿದ್ದರು. ಇದು ರಾಜ್ಯ ಬಿಜೆಪಿ ನಾಯಕರ ಅಸಮಾಧಾನಕ್ಕೆ ಕಾರಣವಾಗಿತ್ತು. ಹೀಗಾಗಿ ಪಕ್ಷದಿಂದ ಉಚ್ಚಾಟಿಸುವಂತೆ ಕೇಂದ್ರ ಸಮಿತಿಗೆ ಬಿಜೆಪಿ ಶಿಸ್ತು ಸಮಿತಿ ವರದಿ ನೀಡಿತ್ತು.

ಇಬ್ಬರನ್ನೂ ಸಹ ಪಕ್ಷದಿಂದ ಹೊರಹಾಕಬೇಕು ಎಂದು ಹಲವು ಶಾಸಕರು ಒತ್ತಡ ಹೇರಿದ್ದರು. ಅಳೆದು ತೂಗಿ ಈಗ ಈ ಇಬ್ಬರು ಶಾಸಕರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ.

# ಕೋವಿಡ್ ಹೆಚ್ಚಳ : ಎಲ್ಲರಿಗೂ ಮಾಸ್ಕ್ ಅಗತ್ಯ ಇಲ್ಲ

ಮತ್ತೆ ಚುಚ್ಚು ಮದ್ದು ಅವಶ್ಯಕತೆ ಇದ್ದರೆ ಕೇಂದ್ರ ಆರೋಗ್ಯ ಇಲಾಖೆ ಜೊತೆ ಚರ್ಚೆ ಮಾಡಿ ವ್ಯಾಕ್ಸಿನ್ ತರಿಸುತ್ತೇವೆ ಎಂದು ತಿಳಿಸಿದರು.

ಕೋವಿಡ್ ಪ್ರಕರಣಗಳು ಹೆಚ್ಚಾಗುತ್ತಿದ್ದರೂ ಜನರು ಆತಂಕ ಪಡಬೇಕಾದ ಅಗತ್ಯ ಇಲ್ಲ. ಟೆಸ್ಟಿಂಗ್‌ಗೆ ಅಗತ್ಯವಿರುವ ಸೌಲಭ್ಯಗಳನ್ನು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚಿಸಲಾಗಿದೆ. ಅಲ್ಲದೆ ಮುಂಜಾಗ್ರತಾ ಕ್ರಮವಾಗಿ ಆರೋಗ್ಯ ಸಿಬ್ಬಂದಿ ಮಾಸ್ಕ್ ಧರಿಸಬೇಕು. ಔಷಧ ಲಭ್ಯತೆ ಹಾಗೂ ಆಕ್ಸಿಜನ್ ಬೆಡ್ ಪರಿಶೀಲನೆ ನಡೆಸಿ ವರದಿ ನೀಡಲು ಸೂಚನೆ ನೀಡಲಾಗಿದೆ ಎಂದರು.

ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೋಸಿನ್ ಮತ್ತು ವೈದ್ಯಕೀಯ ಶಿಕ್ಷಣದ ನಿರ್ದೇಶಕಿ ಡಾ. ಸುಜಾತಾ ರಾಥೋಡ್ ಬಿ.ಎಲ್. ಉಪಸ್ಥಿತರಿದ್ದರು.

## ಸದ್ಯ ಮಾಸ್ಕ್ ಕಡ್ಡಾಯ ಅವಶ್ಯಕತೆ ಇಲ್ಲ

ಕೋವಿಡ್ ಪ್ರಕರಣಗಳು ಇದ್ದರೂ ಎಲ್ಲರಿಗೂ ಮಾಸ್ಕ್ ಕಡ್ಡಾಯ ಮಾಡುವ ಅಗತ್ಯವಿಲ್ಲ. ಜ್ವರ, ಶೀತ, ನೆಗಡಿ ಇದ್ದವರು ಧರಿಸಿದರೆ ಸಾಕು. ನಾವು ಉತ್ತಮವಾಗಿ ಮಾನಿಟರ್ ಮಾಡುತ್ತೇವೆ. ಈ ಬಾರಿ ಮಳೆ ಹೆಚ್ಚಾಗಿದ್ದರಿಂದ ಹವಾಮಾನ ಕೂಡ ಬದಲಾವಣೆ. ಇದರಿಂದಲೂ ಜ್ವರ, ನೆಗಡಿ, ಕೆಮ್ಮು ಬರುತ್ತಿದೆ ಎಂದು ಸಚಿವ ಶರಣ್ ಪ್ರಕಾಶ ಪಾಟೀಲ್ ಸ್ಪಷ್ಟಪಡಿಸಿದರು.

## ಬಿಜೆಪಿ ನಾಯಕರಿಗೆ ಹುಚ್ಚು ಹಿಡಿದಿದೆ : ಡಾ. ಶರಣ ಪ್ರಕಾಶ ಪಾಟೀಲ್

ಕಲಬುರಗಿಯ ಜಿಲ್ಲಾಧಿಕಾರಿಯನ್ನು ಪಾಕಿಸ್ತಾನದವರು ಎಂದು ನಿಂದಿಸಿದ ಬಿಜೆಪಿಯ ವಿಧಾನಪರಿಷತ್ ಬಿಜೆಪಿ ಸದಸ್ಯ ಎನ್ ರವಿ ಕುಮಾರ್ ವಿರುದ್ಧ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣ ಪ್ರಕಾಶ ಬಿಜೆಪಿಯವರಿಗೆ ಬುದ್ಧಿ ಭ್ರಮಣೆಯಾಗಿದೆ. ಐಎಎಸ್ ಅಧಿಕಾರಿ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡಿದ್ದು, ವಿಷಾದನೀಯ. ಶಾಲಾ ಮಕ್ಕಳು ಕೂಡ ಹೀಗೆ ಮಾತನಾಡಲ್ಲ. ಸಾರ್ವಜನಿಕ ಜೀವನದಲ್ಲಿ ಇರಲು ಇಂಥವರು ಅನರ್ಹ' ಎಂದು ಕಿಡಿಕಾರಿದರು.

ಐಎಎಸ್ ಅಧಿಕಾರಿ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡಿರುವದನ್ನು ಐಎಎಸ್ ಅಧಿಕಾರಿಗಳ ಒಕ್ಕೂಟ ಈಗಾಗಲೇ ಖಂಡಿಸಿದೆ. ಶಾಸಕ ರವಿಕುಮಾರ್ ವಿರುದ್ಧ ಪತ್ರ ಬರೆದು, ಕ್ಷಮೆ ಕೋರಬೇಕು ಎಂದು ಆಗ್ರಹಿಸಿದರು.

# ಅರಣ್ಯ ಇಲಾಖೆ ರಾಯಭಾರಿಯಾಗಿ ಕುಂಬ್ಳೆ

ಈ ಹಿಂದೆ ಕರ್ನಾಟಕ ವನ್ಯಜೀವಿ ಮಂಡಳಿಯ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ ಅನುಭವ ಇರುವ ಅನಿಲ್ ಕುಂಬ್ಳೆ ವಿಶ್ವದಾದ್ಯಂತ ಖ್ಯಾತಿ ಹೊಂದಿದ್ದು, ಅರಣ್ಯ ಸಂರಕ್ಷಣೆ, ಅರಣ್ಯ ಸಂವರ್ಧನೆ, ವೃಕ್ಷ ಸಂರಕ್ಷಣೆ, ವನ್ಯಜೀವಿ ಸಂರಕ್ಷಣೆಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಿದ್ದಾರೆ ಎಂದರು.

**ಯಾವುದೇ ಸಂಭಾವನೆ ಇಲ್ಲ:** ಅನಿಲ್ ಕುಂಬ್ಳೆ ಅವರಿಗೆ ವನ್ಯಜೀವಿಗಳ ಬಗ್ಗೆ ಅಪಾರ ಕಾಳಜಿ ಇದೆ. ಅರಣ್ಯದ ಬಗ್ಗೆ ಪ್ರೀತಿ ಇದೆ. ಹೀಗಾಗಿ ಅವರು ಯಾವುದೇ ಸಂಭಾವನೆ ಪಡೆಯದೆ ರಾಯಭಾರಿ ಆಗಲು ಸಮ್ಮತಿಸಿದ್ದಾರೆ ಎಂದು ಈಶ್ವರ ಖಂಡ್ರೆ ಸ್ಪಷ್ಟಪಡಿಸಿದರು.

# ತುಂಗಭದ್ರಾ ಅಚ್ಚುಕಟ್ಟು ರೈತರಿಗೆ ಶುರುವಾದ ಆತಂಕ

ಕಿತ್ತೋಗಿರುವ ಗೇಟ್ ಡ್ಯಾಂಗೆ 43 ಟಿಎಂಸಿ ನೀರು ಸಂಗ್ರಹವಾಗುವರೆಗೆ ಅವಕಾಶವಿದೆ. ಈ ಮಧ್ಯೆ ಗೇಟ್ 19 ರ ಬದಲಾವಣೆಗೆ 1.96 ಕೋಟಿ ರೂಪಾಯಿ ಟೆಂಡರ್ ಪ್ರಕ್ರಿಯೆ ನಡೆದಿದೆ. ಜುಲೈ ವೇಳೆಗೆ ಹೊಸ ಗೇಟ್ ಅಳವಡಿಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

ಆದರೆ ಎಪ್ರಿಲ್ ಮೊದಲ ವಾರ ಜಲಾಶಯದಿಂದ ಕಾಲುವೆಗೆ ನೀರು ನಿಲ್ಲಿಸಲಾಗಿದೆ. ಗೇಟ್ ಕಿತ್ತೋಗಿ 9 ತಿಂಗಳಾಗಿದೆ. ಆದರೂ ಇನ್ನೂ ಹೊಸ ಗೇಟ್ ಅಳವಡಿಕೆಗೆ ರಾಜ್ಯ ಸರಕಾರ ಮತ್ತು ಟಿಬಿ ಬೋರ್ಡ್ ನಿರ್ಲಕ್ಷ್ಯ ವಹಿಸಿವೆ.

ಇದರಿಂದ ರೈತರಿಗೆ ಅನ್ಯಾಯವಾಗುತ್ತಿದೆ. ಜಲಾಶಯ ಬೇಗ ಭರ್ತಿಯಾದರೆ ಗೇಟ್ ಅಳವಡಿಕೆ ಕಷ್ಟ ಸಾಧ್ಯವಾಗುತ್ತದೆ. ಇದರಿಂದಾಗಿ ಈ ಬಾರಿ ಕೇವಲ 80 ಟಿಎಂಸಿ ನೀರು ಮಾತ್ರ ನಿಲ್ಲಿಸುವ ಸಾಧ್ಯತೆ ಇದೆ. ಇದರಿಂದಾಗಿ ತುಂಗಭದ್ರಾ ಜಲಾಶಯದ ಅಚ್ಚುಕಟ್ಟು ರೈತರಿಗೆ ಈ ಬಾರಿ ಸಮಸ್ಯೆಯಾಗುವ ಆತಂಕ ಎದುರಾಗಿದೆ.

ಸಕಾಲಕ್ಕೆ ಗೇಟ್ ಅಳವಡಿಕೆಗೆ ತಜ್ಞರು ನೀಡಿದ ವರದಿ ನಿರ್ಲಕ್ಷ್ಯ ಮಾಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜಲಾಶಯದ 33 ಗೇಟ್ ಬದಲಾಯಿಸುವದಾಗಿ ಹೇಳಿದ್ದರು ಅವರು ನೀಡಿದ ಭರವಸೆ ಈಡೇರಿಸುವ ಬಗ್ಗೆ ಆಸಕ್ತಿ ವಹಿಸುತ್ತಿಲ್ಲ.

ತುಂಗಭದ್ರಾ ಜಲಾಶಯದಲ್ಲಿ ಈಗ 12 ಟಿಎಂಸಿ ನೀರು ಇದ್ದು, ಈ ಬಾರಿ ಜಲಾಶಯಕ್ಕೆ ಈಗಲೇ ಅಪಾರ ನೀರು ಹರಿದು ಬರುತ್ತಿದೆ. ಗೇಟ್ ಅಳವಡಿಕೆ ವಿಳಂಬ ಮಾಡಿದರೆ ಈ ವರ್ಷವೂ ಗೇಟ್ ಅಳವಡಿಕೆ ಅಸಾಧ್ಯ ಎಂಬ ಮಾತು ಕೇಳಿ ಬರುತ್ತದೆ. ಜಲಾಶಯ ಅರ್ಧ ತುಂಬುವದರೊಳಗಾಗಿ ಗೇಟ್ 19 ಅಳವಡಿಸಬೇಕು ಎಂದು ರೈತರು ಹಾಗೂ ಬಿಜೆಪಿ ಮುಖಂಡರು ಆಗ್ರಹ ಮಾಡಿದ್ದಾರೆ.

# ಅನಂತ್‌ನಾಗ್, ಸೂರ್ಯಪ್ರಕಾಶ್‌ಗೆ ಪದ್ಮಭೂಷಣ

ಕರ್ನಾಟಕ ಮೂಲದ ಖ್ಯಾತ ವಯಲಿನ್ ವಾದಕ ಲಕ್ಷ್ಮೀ ನಾರಾಯಣ ಸುಬ್ರಹ್ಮಣ್ಯಂ ಅವರಿಗೆ 'ಪದ್ಮವಿಭೂಷಣ', ಅನಂತ್‌ನಾಗ್ ಮತ್ತು ಎ. ಸೂರ್ಯಪ್ರಕಾಶ್ ಅವರಿಗೆ 'ಪದ್ಮಭೂಷಣ' ಮತ್ತು ಪ್ರಸಿದ್ಧ ವೈದ್ಯೆ ಡಾ.ವಿಜಯಲಕ್ಷ್ಮೀ ದೇಶಮಾನೆ, ತೊಗಲು ಗೊಂಬೆಯಾಟದ ಹಿರಿಯ ಕಲಾವಿದೆ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೆಕ್ಯಾತರ, ಹಾಸನ್ ರಘು, ಪ್ರಶಾಂತ್ ಪ್ರಕಾಶ್, ರಿಕಿ ಕೇಜ್, ವೆಂಕಪ್ಪ ಅಂಬಾಜಿ ಸುಗತೇಕರ ಅವರಿಗೆ 'ಪದ್ಮಶ್ರೀ' ಪ್ರಶಸ್ತಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರದಾನ ಮಾಡಿದರು.

ಈ ಬಾರಿ 7 ಮಂದಿ ಸಾಧಕರಿಗೆ ಪದ್ಮವಿಭೂಷಣ, 19 ಮಂದಿ ಸಾಧಕರಿಗೆ ಪದ್ಮಭೂಷಣ ಮತ್ತು 113 ಮಂದಿ ಸಾಧಕರಿಗೆ ಪದ್ಮಶ್ರೀ ಪ್ರಶಸ್ತಿ ಘೋಷಿಸಲಾಗಿತ್ತು.

# ಹೆಚ್ಚುವರಿ 250 ಕೋ.ರೂ ಸಚಿವ



ಸ್ವಚ್ಛ ಭಾರತ ಮಿಷನ್ 2.0 ಯೋಜನೆಯಡಿ ನಗರ ಪ್ರದೇಶಗಳಲ್ಲಿ ಗೃಹ ಶೌಚಾಲಯಗಳು ಮತ್ತು ಸಾರ್ವಜನಿಕ ಶೌಚಾಲಯ ನಿರ್ಮಾಣ ಮಾಡಲಾಗಿದೆ. ಅಮೃತ 2.0 ಯೋಜನೆ ಅಡಿಯಲ್ಲಿ ಉದ್ಯಾನವನ ಹಾಗೂ ಕೆರೆಗಳ ಪುನಶ್ಚೇತನ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಹುಮನಾಬಾದನಲ್ಲಿ 3 ಪಾರ್ಕ್‌ಗಳ ನಿರ್ಮಾಣ ಮತ್ತು ಬೀದರನಲ್ಲಿ ಪಾಪನಾಶ ಕೆರೆ 5 ಕೋಟಿ ರೂ. ಮತ್ತು ಗೋರ್ನಳ್ಳಿ ಕೆರೆಗೆ 15 ಕೋಟಿ ರೂ. ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಜಿಲ್ಲೆಯಲ್ಲಿ ಹೊಸದಾಗಿ 5 ಇಂದಿರಾ ಕ್ಯಾಂಟೀನ್ ಗಳು ಆರಂಭವಾಗಲಿವೆ, ಬೀದರ ನಗರದಲ್ಲಿ 3, ಚಿಟ್ಟಗುಪ್ಪಾ ಮತ್ತು ಹಳ್ಳಿಖೇಡ (ಬಿ) ಗಳಲ್ಲಿ ತಲಾ ಒಂದು ಆರಂಭವಾಗಲಿವೆ. ಇ-ಖಾತಾಗೆ ಸಂಬಂಧಿಸಿದ ಕಾರ್ಯಗಳು ಕೂಡ ತ್ವರಿತವಾಗಿ ಪ್ರಗತಿ ಕಾಣಬೇಕು ಎಂದು ತಿಳಿಸಿದರು.

ಹುಮನಾಬಾದ ಶಾಸಕ ಡಾ. ಸಿದ್ಧಲಿಂಗಪ್ಪ ಎನ್. ಪಾಟೀಲ್ ಮಾತನಾಡಿ, ಹುಮನಾಬಾದ, ಚಿಟ್ಟಗುಪ್ಪಾ, ಹಳ್ಳಿಖೇಡ (ಬಿ) ಪುರಸಭೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸಚಿವರಿಗೆ ಮನವಿ ಮಾಡಿದರು

ಬೀದರ ದಕ್ಷಿಣ ಶಾಸಕ ಶೈಲೇಂದ್ರ ಬೆಲ್ದಾಳೆ ಅವರು ಮಾತನಾಡಿ, ಹೊಸದಾಗಿ ಆಗಿರುವ ಮಹಾನಗರ ಪಾಲಿಕೆಗೆ ಬೀದರ ದಕ್ಷಿಣದ 8 ಗ್ರಾಮಗಳು ಸೇರ್ಪಡೆಯಾಗಿವೆ.

ಅವುಗಳ ಸರ್ವಾಂಗೀಣ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲು ಸಚಿವರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಪೌರಾಡಳಿತ ಮತ್ತು ಹಜ್ ಸಚಿವರ ಆಪ್ತ ಕಾಯದರ್ಶಿ ಕೆ. ಮುರಳಿಧರ, ನಗರಸಭೆ ಅಧ್ಯಕ್ಷ ಮಹಮ್ಮದ ಗೌಸ, ಬೀದರ ನಗರಸಭೆಯ ಆಯುಕ್ತ ಶಿವರಾಜ್ ರಾಥೋಡ್ ಹಾಗೂ ಎಲ್ಲಾ ನಗರಸಭೆ ಮತ್ತು ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಮುಖ್ಯ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಗೋರನಳ್ಳಿ ಎಸ್ ಟಿ ಪಿ ಬಳಕೆಗೆ ಕ್ರಮ ವಹಿಸಿ

ಬೀದರ್ - ನಗರ ಹೊರವಲಯದ ಗೋರನಳ್ಳಿ ಸಮೀಪದ ಎಸ್ ಟಿ ಪಿ ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಶಾಸಕ ಶೈಲೇಂದ್ರ ಬೆಲ್ದಾಳೆ ಹೇಳಿದ್ದಾರೆ.

ನಗರದಲ್ಲಿ ಪೌರಾಡಳಿತ ಸಚಿವ ರಹೀಮ್ ಖಾನ್ ನೇತೃತ್ವದಲ್ಲಿ ನಡೆದ ನಗರ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಮೇಘಾ ಹೆಸರಿನ ಕಂಪೆನಿ ಎಸ್ ಟಿ ಪಿ ನಿರ್ಮಿಸಿದೆ. ಆದರೆ, ಸರಿಯಾದ ಕ್ರಮದಲ್ಲಿ ನಿರ್ಮಾಣ ಮಾಡಿಲ್ಲ. ಹಾಗಾಗಿ, ಅಧಿಕಾರಿಗಳು ಸರಿಯಾದ ನಿಟ್ಟಿನಲ್ಲಿ ಉಪಯೋಗವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

# ರಾಜ್ಯದಲ್ಲಿ ಶೀಘ್ರ ನ್ಯಾಯದಾನ ಕಾಯ್ದೆ ಜಾರಿ

ಸಿವಿಲ್ ನ್ಯಾಯಾಲಯಗಳಲ್ಲಿ ದಾಖಲಾಗುವ ಪ್ರಕರಣಗಳು ಶೀಘ್ರ ಇತ್ಯರ್ಥ ಆಗುವುದಿಲ್ಲ. ಜನಸಾಮಾನ್ಯರು 10-15 ವರ್ಷಗಳು ಕಾಯುವ ಪರಿಸ್ಥಿತಿ ಇದೆ. ಇಂತಹ ಕಾಯುವಿಕೆಗೆ ಮುಕ್ತಿ ನೀಡಲು ಕರ್ನಾಟಕ ಯಶಸ್ವಿಯಾದ ದಿಟ್ಟಹೆಜ್ಜೆಯನ್ನಿಟ್ಟಿದೆ. ಕರ್ನಾಟಕ ಸರ್ಕಾರ ಕ್ರಾಂತಿಕಾರಕ ತಿದ್ದುಪಡಿಯನ್ನು ಸಿವಿಲ್ ಪ್ರಕ್ರಿಯಾ ಸಂಹಿತೆಗೆ ಮಾಡಿದೆ. ಈ ಐತಿಹಾಸಿಕ ತಿದ್ದುಪಡಿ ರಾಷ್ಟ್ರದಲ್ಲಿಯೇ ಮೊದಲು. ತಕ್ಷಣದಿಂದ ಈ ತಿದ್ದುಪಡಿ ಜಾರಿಗೆ ಬರಲಿದೆ ಎಂದು ಸಚಿವ ಪಾಟೀಲ ಹೇಳಿದರು.

**ರಾಜಿ ಸಂಧಾನ ಕಡ್ಡಾಯ :** ಪ್ರತಿಯೊಂದು ಸಿವಿಲ್ ಪ್ರಕರಣಗಳು ರಾಜಿ ಸಂಧಾನದ ಮೂಲಕ ಬಗೆಹರಿಸಲು ಕಡ್ಡಾಯವಾದ ಪ್ರಯತ್ನ ಮಾಡಬೇಕು. ಎರಡು ತಿಂಗಳೊಳಗಾಗಿ ರಾಜಿ ಸಂಧಾನದ ಪ್ರಯತ್ನ ತಾರ್ಕಿಕ ಅಂತ್ಯ ಕಾಣಬೇಕು. ಸಾಧ್ಯವಾಗದಿದ್ದಾಗ ನ್ಯಾಯಾಲಯ ಪ್ರಕರಣವನ್ನು ವಿಚಾರಣೆಗೆ ಕೈಗೆತ್ತಿಕೊಳ್ಳಬೇಕು ಎಂಬ ಶಾಸನಾತ್ಮಕ ಅವಕಾಶ ದೊರೆತಿರುವುದು ಕಕ್ಷಿದಾರನ ಪಾಲಿಗೆ ತೆರೆದ ಭಾಗ್ಯದ ಬಾಗಿಲು ಎಂದು ಸಚಿವರು ವಿವರಿಸಿದರು.

ನ್ಯಾಯಾಲಯಗಳ ಕಲಾಪಗಳಲ್ಲಿ ವಿಳಂಬ ನಿರಾಕರಿಸುವ, ಚರಿತ್ರಾರ್ಹ ಸುಧಾರಣೆಗೆ ಶಾಸನಾತ್ಮಕ ಅಂಕುಶ ಹೊಂದಿರುವ ಈ ತಿದ್ದುಪಡಿ ಪ್ರಕರಣ ದಾಖಲಾದ ದಿನಾಂಕದಿಂದ 24 ತಿಂಗಳಲ್ಲಿ ಯಾವುದೇ ಸಿವಿಲ್ ಪ್ರಕರಣ ಇತ್ಯರ್ಥವಾಗಿ, ತಾರ್ಕಿಕ ಅಂತ್ಯ ಕಾಣುವುದಕ್ಕೆ ಸುನಿಶ್ಚಿತಗೊಳಿಸುವ ಶಾಸನ ಜಾರಿಗೆ ಬಂದಿದೆ. ಇದು ನ್ಯಾಯಾದಾನದ ವಿಳಂಬಕ್ಕೆ ಇತಿಶ್ರೀ ಹಾಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಿರ್ವಹಣೆಗೆ ಈ ತಿದ್ದುಪಡಿ ಇಂಬು ನೀಡಲಿದೆ. ಲಿಖಿತ ಹೇಳಿಕೆ, ಸಾಕ್ಷ್ಯ ಸಂಗ್ರಹ ಎಲ್ಲದಕ್ಕೂ ಕಾಲಮಿತಿ ನಿಗದಿಪಡಿಸಲು ಶಾಸನ ಅವಕಾಶ ಕಲ್ಪಿಸಿದೆ. ಯಾವುದೇ ಹಂತದಲ್ಲಿ ಒಂದು ತಿಂಗಳೊಳಗಾಗಿ ಕೇವಲ 3 ಮುಂದೂಡಿಕೆ ಅಥವಾ 3 ದಿನಾಂಕಗಳ ಅವಕಾಶ ಮಾತ್ರ ಕಲ್ಪಿಸಲಾಗುವುದು. ಯಾವುದೇ ಹಂತದಲ್ಲಿ ಅರ್ಜಿದಾರ-ಪ್ರತಿವಾದಿ ಈ ಅವಕಾಶದಲ್ಲಿ ಸಲ್ಲಿಸದಿದ್ದರೆ, ಅಂಥವರ ಹೇಳಿಕೆಗಳನ್ನು ಶೂನ್ಯವೆಂದು ಪರಿಗಣಿಸಲು ಅವಕಾಶ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಈ ಕಾನೂನಿನಲ್ಲಿ ಪ್ರಕರಣ ನಿರ್ವಹಣೆಯನ್ನು ಪುನರ್ ವ್ಯಾಖ್ಯಾನ ಮಾಡಲಾಗಿದೆ. ಸಾಕ್ಷ್ಯಗಳ ವಿಚಾರಣೆಗಳನ್ನು ನಿಗದಿತ ದಿನಾಂಕದಂದು ಕೈಗೊಳ್ಳಲು ಮತ್ತು ದೈನಂದಿನ ಅಥವಾ ಸಾಪ್ತಾಹಿಕ ಆಧಾರದಲ್ಲಿ ಈ ತಿದ್ದುಪಡಿಗೆ ಅವಕಾಶ ಕಲ್ಪಿಸಿರುವುದರಿಂದ ಯಾವುದೇ ಪ್ರಕರಣ ಅನಿರ್ದಿಷ್ಟಕಾಲ ವಿಳಂಬಕ್ಕೆ ಕಾರಣವಾಗುವುದಿಲ್ಲ. ಆಗದಂತೆ ಸುನಿಶ್ಚಿತಗೊಳಿಸುವ ಜನಪರ ಕಾನೂನು ಅಸ್ತಿತ್ವಕ್ಕೆ ತರಲಾಗಿದೆ.

ರಾಜ್ಯದಲ್ಲಿ 2023ರವರೆಗೆ 9.37 ಲಕ್ಷ ಪ್ರಕರಣಗಳು ಜಿಲ್ಲಾ ಹಂತದ ನ್ಯಾಯಾಲಯಗಳ ಮುಂದೆ ಬಾಕಿ ಇವೆ.

3 ವರ್ಷಕ್ಕಿಂತ ಹಳೆಯದಾದ 3.49 ಲಕ್ಷ ಪ್ರಕರಣಗಳಿವೆ ಎಂದ ಅವರು, 158 ನ್ಯಾಯಾಧೀಶರ ನೇಮಕಾತಿ ತಡೆ ಪ್ರಕರಣ ಸುಪ್ರೀಂ ಕೋರ್ಟ್ ನಲ್ಲಿ ಬಗೆಹರಿದಿದೆ. ಸದ್ಯದಲ್ಲೇ ನೇಮಕಾತಿ ಆದೇಶ ಆಗಲಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಎರಡು ವರ್ಷಗಳ ಸಾಧನೆ ಬಿಚ್ಚಿಟ್ಟ ಅರಣ್ಯ ಸಚಿವ ಈಶ್ವರ ಖಂಡ್ರೆ। ಯಲಹಂಕ ಬಳಿ ಕಬ್ಬನ್ ಪಾರ್ಕ್ ಮಾದರಿ ಬೃಹತ್ ಉದ್ಯಾನ

# ಎರಡು ವರ್ಷದಲ್ಲಿ 6251 ಎಕರೆ ಅರಣ್ಯ ತೆರವು



● **ಸುದ್ದಿಮೂಲ ವಾರ್ತೆ** ಬೆಂಗಳೂರು, ಮೇ.27:

**ತಾವು ಅರಣ್ಯ ಸಚಿವರಾಗಿ ಅಧಿಕಾರ ವಹಿಸಿಕೊಂಡ ಕಳೆದ ಎರಡು ವರ್ಷದಲ್ಲಿ ಕೋಟ್ಯಂತರ ರೂಪಾಯಿ ಬೆಲೆ ಬಾಳುವ 6251 ಎಕರೆ ಅರಣ್ಯ ತೆರವು ಮಾಡಿಸಲಾಗಿದೆ. ಕೃಷಿಕರಿಗೆ ತಮ್ಮ ಜಮೀನಿನಲ್ಲಿ ನಾಟಿ ಮಾಡಲು ಮತ್ತು ಇತರ ಜಮೀನಿನಲ್ಲಿ ನೆಡಲು ಒಟ್ಟಾರೆ 3.70 ಕೋಟಿ ಸಸಿಗಳನ್ನು ವಿತರಣೆ ಮಾಡಲಾಗಿದೆ ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಹೇಳಿದರು.**

ಅರಣ್ಯ ಸಚಿವರಾಗಿ ಅಧಿಕಾರ ಸ್ವೀಕರಿಸಿ 2 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒತ್ತುವರಿ ತೆರವು ನಿರಂತರ ಪ್ರಕ್ರಿಯೆಯಾಗಿದೆ ಎಂದು ಹೇಳಿದರು.

ಬೆಂಗಳೂರು ಮಹಾನಗರದಲ್ಲಿ ಭೂಮಿಗೆ ಬಂಗಾರದ ಬೆಲೆ ಇದೆ. ಇಲ್ಲಿ ಹಲವು ದಶಕದಿಂದ ಅರಣ್ಯ ಭೂಮಿ ಒತ್ತುವರಿ ಆಗಿದ್ದು, ತಾವು ಸಚಿವನಾದ ತರುವಾಯ 2 ವರ್ಷದಲ್ಲಿ ಸುಮಾರು 4000 ಕೋಟಿ ರೂ. ಮಾರುಕಟ್ಟೆ ಮೌಲ್ಯದ 128 ಎಕರೆ ಅರಣ್ಯ ಒತ್ತುವರಿ ತೆರವು ಮಾಡಿಸಿರುವುದಾಗಿ ತಿಳಿಸಿದರು.

ಕೇಂದ್ರ ಸರ್ಕಾರಿ ಸ್ವಾಮ್ಯದ ಎಚ್.ಎಂ.ಟಿ. ತನ್ನ ವಶದಲ್ಲಿರುವ ಸುಮಾರು 14,300 ಕೋಟಿ ರೂ. ಮೌಲ್ಯದ 444 ಎಕರೆ ಅರಣ್ಯ ಭೂಮಿಯನ್ನು ರಿಯಲ್ ಎಸ್ಟೇಟ್ ಸಂಸ್ಥೆಗಳು ಸೇರಿದಂತೆ ಹಲವು ಸಂಸ್ಥೆಗಳಿಗೆ ಮಾರಾಟ ಮಾಡುವುದನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ. ಈ ಅರಣ್ಯ ಜಮೀನು ಹಿಂಪಡೆದು, ಉದ್ಯಾನವಾಗಿ ಉಳಿಸಿಕೊಳ್ಳಲು ತೀರ್ಮಾನಿಸಲಾಗಿದ್ದು, ಇದಕ್ಕಾಗಿ ಕಾನೂನು ಹೋರಾಟ ನಡೆದಿದೆ ಎಂದು ಹೇಳಿದರು.

ಹಳೆ ಮೈಸೂರು ಭಾಗದಲ್ಲಿ ಬ್ರಿಟಿಷರ ಕಾಲದಲ್ಲಿ ವಿವಿಧ ವ್ಯಕ್ತಿ, ಸಂಸ್ಥೆಗಳಿಗೆ ಸುಮಾರು 5050 ಎಕರೆ ಅರಣ್ಯ ಭೂಮಿ ದೀರ್ಘಕಾಲದ (999 ವರ್ಷ) ಗುತ್ತಿಗೆ ನೀಡಲಾಗಿತ್ತು. ಈ 999 ವರ್ಷದ ಗುತ್ತಿಗೆ ಅವಧಿ ಸರ್ಕಾರ 99 ವರ್ಷಕ್ಕೆ ಇಳಿಕೆ ಮಾಡಿ ಗೆಜೆಟ್ ಅಧಿಸೂಚನೆ ಹೊರಡಿಸಿದೆ. ಈಗ ಇವುಗಳಲ್ಲಿ ಕೆಲವು ಗುತ್ತಿಗೆ ಅವಧಿ ಮುಗಿದಿದ್ದರೂ ಅರಣ್ಯ ಇಲಾಖೆಗೆ ಜಮೀನು ಬಿಟ್ಟುಕೊಡದೆ ನ್ಯಾಯಾಲಯದ ಮೆಟ್ಟಿಲೇರಿದ್ದಾರೆ. ಈ ಎಲ್ಲ ಭೂಮಿ ಹಿಂಪಡೆಯಲು ಮತ್ತು ಆ ಸಂಸ್ಥೆಗಳಿಂದ ಇಲಾಖೆಗೆ ಬರಬೇಕಾದ ಸಾವಿರಾರು ಕೋಟಿ ರೂ. ಬಾಕಿ ವಸೂಲಿಗೆ ಕಾನೂನು ಹೋರಾಟ ಮಾಡಲಾಗುತ್ತಿದೆ. ಹೈಕೋರ್ಟ್ ನಲ್ಲಿ ಈ ಪ್ರಕರಣಗಳ ಅರ್ಜಿಯ ವಿಚಾರಣೆ ಹಂತದಲ್ಲಿದೆ ಎಂದು ವಿವರ ನೀಡಿದರು.

ಕಳೆದ 2 ವರ್ಷದಲ್ಲಿ ಕೃಷಿಕರಿಗೆ ತಮ್ಮ ಜಮೀನಿನಲ್ಲಿ ನಾಟಿ ಮಾಡಲು ಮತ್ತು ಇತರ ಜಮೀನಿನಲ್ಲಿ ನೆಡಲು ಒಟ್ಟಾರೆ 3.70 ಕೋಟಿ ಸಸಿ ವಿತರಣೆ ಮಾಡಲಾಗಿದೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು.

**ಬೆಂಗಳೂರಿನಲ್ಲಿ ಬೃಹತ್ ಉದ್ಯಾನ :** ಬೆಂಗಳೂರಿನಲ್ಲಿ ಶ್ವಾಸತಾಣಗಳನ್ನು ಉಳಿಸಲು, ಬೆಳೆಸಲು ಸರ್ಕಾರ ನಿರ್ಧರಿಸಿದ್ದು, ಯಲಹಂಕ ಬಳಿಯ ಮಾದಪ್ಪನಹಳ್ಳಿಯ 153 ಎಕರೆ ಪ್ರದೇಶದಲ್ಲಿ ಮತ್ತೊಂದು ಬೃಹತ್ ಉದ್ಯಾನ ನಿರ್ಮಿಸಲು ತೀರ್ಮಾನಿಸಲಾಗಿದೆ. ಇಲ್ಲಿ ನೀಲಗಿರಿ ಬೆಳೆಸಲು ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮಕ್ಕೆ ನೀಡಿದ್ದ 153 ಎಕರೆ ಜಮೀನನ್ನು ಜೂ.2ರಂದು ಮರಳಿ ಅರಣ್ಯ ಇಲಾಖೆಗೆ ಪಡೆದು ಅಲ್ಲಿ ಉದ್ಯಾನ ನಿರ್ಮಿಸಲಾಗುವುದು ಎಂದರು.

**8,848 ವನಮಹೋತ್ಸವ :** ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಪರಿಣಾಮವನ್ನು ಜಗತ್ತೇ ಎದುರಿಸುತ್ತಿದ್ದು, ಈ ಕಾಲಘಟ್ಟದಲ್ಲಿ ಹಸಿರು ಹೊದಿಕೆಯ ಹೆಚ್ಚಳ, ಅರಣ್ಯ ಸಂರಕ್ಷಣೆ ಮತ್ತು ನಿರ್ವಹಣೆ ಇಲಾಖೆಯ ಜವಾಬ್ದಾರಿಯಾಗಿದ್ದು, ಕಳೆದ 2 ವರ್ಷಗಳಲ್ಲಿ ಸುಮಾರು 8848 ವನಮಹೋತ್ಸವ ನಡೆಸಲಾಗಿದ್ದು, ಅರಣ್ಯ ಪ್ರದೇಶ, ರಸ್ತೆಬದಿ ಮತ್ತು ಸರ್ಕಾರಿ ಜಾಗದಲ್ಲಿ ಸುಮಾರು 8.5 ಕೋಟಿ ಸಸಿಗಳನ್ನು ನೆಟ್ಟು, ಪೋಷಿಸಲಾಗಿದೆ, 2023-24 ಮತ್ತು 2024-25ರ ಸಾಲಿನಲ್ಲಿ ಒಟ್ಟು 120975 ಹೆಕ್ಟೇರ್ ಪ್ರದೇಶದಲ್ಲಿ ನೆಡುತೋಪು, 25 ಹೊಸ ವೃಕ್ಷೋದ್ಯಾನ ಮತ್ತು 35 ದೇವರ ಕಾಡು ನಿರ್ಮಾಣ ಮಾಡಲಾಗಿದೆ ಎಂದು ವಿವರ ನೀಡಿದರು.

**ಹೆಸರುಘಟ್ಟ ಹುಲ್ಲುಗಾವಲು :** ಬೆಂಗಳೂರು ನಗರದ ಹೆಸರಘಟ್ಟದಲ್ಲಿ ಅಪರೂಪದ ಹುಲ್ಲುಗಾವಲಿದೆ. ಇದು ನೂರಾರು ಪ್ರಭೇದದ ಪಕ್ಷಿಗಳ ಸಂತಾನೋತ್ಪತ್ತಿಯ ತಾಣವಾಗಿದ್ದು, ಇಷ್ಟು ಸುಂದರ ಪರಿಸರ ಉಳಿಸಲು ದಶಕಗಳಿಂದ ಹೋರಾಟ ನಡೆದಿತ್ತು. ತಾವು ಸಚಿವನಾದ ಬಳಿಕ, ಹಲವು ಒತ್ತಡದ ನಡುವೆಯೂ ಹೆಸರುಘಟ್ಟ ಕೆರೆ ಸುತ್ತಮುತ್ತಲ್ಲಿರುವ ಅಪರೂಪದ ಹುಲ್ಲುಗಾವಲು ರಕ್ಷಣೆಗಾಗಿ 5678 ಎಕರೆ ಪ್ರದೇಶವನ್ನು ಗ್ರೇಟರ್ ಹೆಸರುಘಟ್ಟ ಸಂರಕ್ಷಿತ ಹುಲ್ಲುಗಾವಲು ಎಂದು ಘೋಷಿಸಿದ್ದಾಗಿ ತಿಳಿಸಿದರು.

ಬೆಂಗಳೂರಿಗೆ ಸಮೀಪದಲ್ಲೇ ಇರುವ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದಲ್ಲಿ ಚಿರತೆ ಸಫಾರಿ ಆರಂಭಿಸಬೇಕೆಂಬ ಬೇಡಿಕೆ ಇತ್ತು, ತಾವು ಸಚಿವನಾದ ತರುವಾಯ ಇದಕ್ಕೆ ಚಾಲನೆ ನೀಡಿದ್ದು, ಇದು ಜನಾಕರ್ಷಣೆಯ ಕೇಂದ್ರವಾಗಿದೆ. ಉದ್ಯಾನಕ್ಕೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆಯಲ್ಲಿ ಹೆಚ್ಚಳವಾಗಿದೆ ಎಂದರು.

**ಸಿಬ್ಬಂದಿ ನೇಮಕಾತಿ :** 310 ಅರಣ್ಯ ವೀಕ್ಷಕರ ಹುದ್ದೆಗಳ ಭರ್ತಿಗೆ ಪ್ರಕ್ರಿಯೆ ನಡೆದು 265 ಜನರಿಗೆ ನೇಮಕಾತಿ ಪತ್ರ ನೀಡಲಾಗಿದೆ. 540 ಅರಣ್ಯ ರಕ್ಷಕರ ಮತ್ತು ಇನ್ನಿತರ ಹುದ್ದೆಗಳ ನೇಮಕಾತಿಗೆ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ತಿಳಿಸಿದರು.

ಪರಿಸರ ಪ್ರವಾಸೋದ್ಯಮಕ್ಕೆ ಒತ್ತು ನೀಡಲಾಗಿದ್ದು, ರಾಜ್ಯದ ಎಲ್ಲ ಚಾರಣ ಪಥಗಳ ಬುಕ್ಕಿಂಗ್ ಅನ್ನು ಆನ್ ಲೈನ್ ಮಾಡಲಾಗಿದೆ, ಅರಣ್ಯ ಅಪರಾಧಗಳನ್ನು ತಡೆಯಲು ಮತ್ತು ಅಪರಾಧಿಗಳಿಗೆ ಶಿಕ್ಷೆಯಾಗುವಂತೆ ಮಾಡಲು ಗರುಡಾಕ್ಷಿ - ಆನ್ ಲೈನ್ ಎಫ್.ಐ.ಆರ್. ವ್ಯವಸ್ಥೆ ಜಾರಿಗೆ ತರಲಾಗಿದೆ ಎಂದು ಸಚಿವರು ವಿವರಣೆ ನೀಡಿದರು.

ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ ಮತ್ತಿತರರು ಉಪಸ್ಥಿತರಿದ್ದರು.

ಕೇಂದ್ರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಸಚಿವ ಪ್ರಿಯಾಂಕ್ ಖರ್ಗೆ

# ಜೆಜೆಎಂಗೆ ಕೇವಲ 117 ಕೋ.ರೂ ಬಿಡುಗಡೆ

● **ಸುದ್ದಿಮೂಲ ವಾರ್ತೆ** ಬೆಂಗಳೂರು, ಮೇ.27: ಜಲಜೀವನ್ ಮಿಷನ್ ಯೋಜನೆಯಡಿ ರಾಜ್ಯಕ್ಕೆ 3 ಸಾವಿರ ಕೋಟಿ ರೂ.ಬದಲು 117 ಕೋಟಿ ರೂ. ಮಾತ್ರ ನೀಡಲಾಗಿದೆ. ಮನರೆಗಾದಲ್ಲಿ 500 ಕೋಟಿ ರೂ.ಬಾಕಿ ಇದೆ. ಸದ್ಯಕ್ಕೆ ನೀವೆ ಹಣ ಕೊಡಿ ಮುಂದಿನ ವರ್ಷ ಬಿಡುಗಡೆ ಮಾಡುತ್ತೇವೆ ಎಂದು ಕೇಂದ್ರ ಸರ್ಕಾರ ಹೇಳುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ದಿನ ಬೆಳಗಾದರೆ ಸುಳ್ಳು ಹೇಳಿಕೊಂಡೆ ರಾಜಕಾರಣ ಮಾಡುತ್ತಾರೆ. ಸತ್ಯ ಮರೆ ಮಾಚುತ್ತಾರೆ. ರಾಜ್ಯದ ವಿಚಾರದಲ್ಲಿ ಕೇಂದ್ರದ ಮಲತಾಯಿ ಧೋರಣೆಯ ಬಗ್ಗೆ ದಿಕ್ಕು ತಪ್ಪಿಸುತ್ತಾರೆ ಎಂದು ಟೀಕಿಸಿದರು.

ಗಂಗಾ ಕಲ್ಯಾಣ ಯೋಜನೆ, ಬೋವಿ ಅಭಿವೃದ್ಧಿ ನಿಗಮ ಹಗರಣದಲ್ಲಿ ಯಾವ ಲೋಪವೂ ಆಗಿಲ್ಲ ಎಂದು ಆರಂಭದಲ್ಲಿ ವಾದಿಸಿದ್ದರು. ಈಗ ಬೋವಿ ನಿಗಮದ ಹಗರಣದಲ್ಲಿ ಆಸ್ತಿಗಳ ಜಪ್ತಿಯಾಗುತ್ತಿದೆ. ಬಿಜೆಪಿ ಯಾವ ವಿಷಯದಲ್ಲೂ ಸತ್ಯ ಹೇಳುವುದಿಲ್ಲ ಎಂದರು.

ಸುಳ್ಳು ಹರಡುವುದರಲ್ಲಿ ಬಿಜೆಪಿಯವರು ಮಾಸ್ಟರ್ ಡಿಗ್ರಿ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರಕ್ಕೆ ಎರಡು ವರ್ಷ ತುಂಬಿದ ಸಂದರ್ಭದಲ್ಲಿ ಬಿಜೆಪಿಯಿಂದ ನೀಡಲಾಗಿರುವ ಜಾಹೀರಾತಿನಲ್ಲಿ ಸಾಕಷ್ಟು ತಪ್ಪು ಮಾಹಿತಿಗಳಿವೆ. ಸರ್ಕಾರದ ಯೋಜನೆಗಳನ್ನು ಅಂಕಿ ಸಂಖ್ಯೆ ಸಹಿತ ಟೀಕೆ ಮಾಡಲಿ. ಆದರೆ ಸುಳ್ಳು ಮಾಹಿತಿ ನೀಡಿದರೆ ಹೇಗೆ ಎಂದು ಪ್ರಶ್ನಿಸಿದರು.

ಸುಳ್ಳು ಸುದ್ದಿ ಹರಡುವುದಕ್ಕೆ ಕ್ರಮ ಕೈಗೊಳ್ಳಲು ಕಾನೂನಿನಲ್ಲಿ ಅವಕಾಶ ಇದೆ. ಬಿಜೆಪಿಯ ಐಟಿ ಸೆಲ್ ನಿರಂತರವಾಗಿ ಸುಳ್ಳು ಮಾಹಿತಿ ಹರಡುತ್ತಿದೆ. ಆಪರೇಷನ್ ಸಿಂಧೂರ್ ಬಗ್ಗೆಯೂ ತಪ್ಪು ಮಾಹಿತಿ ನೀಡಿ ಜನರನ್ನು ದಾರಿ ತಪ್ಪಿಸುವ ಪ್ರಯತ್ನ ಮಾಡಲಾಯಿತು. ಇವರೆಲ್ಲಾ ಹಿಟ್ಲರ್ ವಂಶದ ಸನಾತನಿಗಳು ಎಂದು ಪ್ರಿಯಾಂಕ್ ಟೀಕೆ ಮಾಡಿದರು.

ಕಲಬುರಗಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್‌ರನ್ನು ಬಿಜೆಪಿಯ ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಟೀಕಿಸಿರುವ ಕುರಿತು ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ, ಅವರು ಮನುಸ್ಮೃತಿ ಮನಸ್ಥಿತಿಯವರು. ಆರ್‌ಎಸ್‌ಎಸ್ ಗರಡಿಯಲ್ಲಿ ಬೆಳೆದಿದ್ದಾರೆ. ಮನುಸ್ಮೃತಿಯಲ್ಲಿ ಮಹಿಳೆಯರಿಗೆ ಅವಕಾಶ ಇದ್ಯಾ. ಹಾಗಾಗಿ ಟೀಕೆ ಮಾಡುತ್ತಾರೆ ಎಂದರು.

# ಆಳಂದ ತಾಲೂಕಿನಲ್ಲಿ ಭಾರಿ ಮಳೆ : ತುಂಬಿ ಹರಿಯುತ್ತಿರುವ ಹಳ್ಳಗಳು



● **ಸುದ್ದಿಮೂಲ ವಾರ್ತೆ** ಕಲಬುರಗಿ, ಮೇ.27: ಜಿಲ್ಲೆಯ ಆಳಂದ ತಾಲೂಕಿನಲ್ಲಿ ಸೋಮವಾರ ರಾತ್ರಿ ಸುರಿದ ಭಾರಿ ಮಳೆಯಿಂದಾಗಿ ತಾಲೂಕಿನ ಹಲವು ಗ್ರಾಮಗಳ ಹಳ್ಳಗಳು ತುಂಬಿ ಹರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ.

ಆಳಂದ ತಾಲೂಕಿನ ನಿಂಬರ್ಗಾ ಗ್ರಾಮದಲ್ಲಿ ಭಾರಿ ಮಳೆ ಯಿಂದಾಗಿ ಗ್ರಾಮದ ಹಳ್ಳ ತುಂಬಿ ಹರಿಯುತ್ತಿದೆ. ಮಳೆ ಮುಂದುವರೆದರೆ ಗಾಣಗಾಪುರ-ನಿಂಬರ್ಗಾ ಮಾರ್ಗ ಸಂಪೂರ್ಣ ಬಂದ್ ಆಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಅಲ್ಲದೇ, ಯಲ್ಲಮ್ಮನ ಗ್ರಾಮದ ಹಳ್ಳ ಹಾಗೂ ಗುಡೂರು ಗ್ರಾಮದ ಹಳ್ಳಗಳು ತುಂಬಿದು, ಎರಡು ಗ್ರಾಮಗಳ ಹಳ್ಳಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿರುವೆ. ಬಿಟ್ಟು ಬಿಡದೆ ಸುರಿಯುತ್ತಿರುವ ಮಳೆಯಿಂದ ಜನರಲ್ಲಿ ಆತಂಕ ಸೃಷ್ಟಿಯಾಗಿದೆ.

Shilpa | Innovating for affordable healthcare

**SHILPA MEDICARE LIMITED.**

**Registered office # 12-6-214/A-1, Hyderabad Road, Raichur-584135**
**Website - www.vbshilpa.com, Email - info@vbshilpa.com. ,Telephone -+91-8532-238704**
**CIN No. - L85110KA1987PLC008739**

**Extract of the Standalone and Consolidated audited Financial Results for the Quarter and Year Ended 31.03.2025**

**(Rs. In Lakhs, except per equity share data)**

| Sl. No. | Particulars | STANDALONE | | | | | CONSOLIDATED | | | | |
|---|---|---|---|---|---|---|---|---|---|---|---|
| | | Quarter ended 31.03.2025 (AUDITED) | Quarter ended 31.12.2024 (UNAUDITED) | Quarter ended 31.03.2024 (Audited) | Year Ended 31.03.2025 (Audited) | Previous year ended 31.03.2024 (Audited) | Quarter ended 31.03.2025 (AUDITED) | Quarter ended 31.12.2024 (UNAUDITED) | Quarter ended 31.03.2024 (Audited) | Year Ended 31.03.2025 (Audited) | Previous year ended 31.03.2024 (Audited) |
| 1 | Total Income from Operations | 12,615.36 | 12,538.66 | 8,745.16 | 47,734.21 | 30,978.67 | 33,080.49 | 31,930.12 | 29,169.25 | 128,641.40 | 115,160.30 |
| 2 | Net Profit / (Loss) for the period (before Tax, Exceptional and/ or Extraordinary items) | 3,489.09 | 2,581.70 | 1,520.91 | 15,297.59 | 4,854.01 | 4,335.46 | 4,161.04 | 2,158.30 | 15,041.43 | 4,821.00 |
| 3 | Net Profit / (Loss) for the period before tax (after Exceptional and/or Extraordinary items) | (942.95) | 2,533.07 | 1,142.56 | 10,723.78 | 3,808.91 | 1,527.32 | 4,161.04 | 2,771.37 | 12,233.29 | 5,434.07 |
| 4 | Net Profit / (Loss) for the period after tax (after Exceptional and/or Extraordinary items) | (515.38) | 1,612.01 | 973.80 | 6,980.29 | 2,693.74 | 1,450.70 | 3,178.44 | 2,450.29 | 7,829.68 | 3,195.52 |
| 5 | **Total Comprehensive Income for the period** | **(709.69)** | **1,612.01** | **808.17** | **6,785.99** | **2,528.11** | **1,212.27** | **3,181.26** | **2,210.06** | **7,599.21** | **2,950.37** |
| 6 | Equity Share Capital | 977.91 | 977.91 | 868.02 | 977.91 | 868.02 | 977.91 | 977.91 | 868.02 | 977.91 | 868.02 |
| 7 | Reserves (excluding Revaluation Reserve) as shown in the Audited Balance Sheet of the previous year. | | - | - | 269,081.31 | 213,403.80 | - | - | - | 236,246.02 | 180,001.39 |
| 8 | Earnings Per Share (of Rs. 1/- each)(for continuing operations) -(in Rs) | (Not annualised) | (Not annualised) | (Not annualised) | (Not annualised) | (Not annualised) | (Not annualised) | (Not annualised) | (Not annualised) | (Not annualised) | (Not annualised) |
| | 1) Basic: | (0.53) | 1.65 | 1.12 | 7.16 | 3.10 | 1.48 | 3.25 | 2.82 | 8.04 | 3.67 |
| | 2) Diluted: | (0.53) | 1.65 | 1.12 | 7.16 | 3.10 | 1.48 | 3.25 | 2.82 | 8.04 | 3.67 |

**Notes:**

1 The above is an extract of the detailed audited financial results for quarter and year ended March31,2025 filed with the Stock Exchanges under Regulation 33 of the SEBI (Listing Obligations and Disclosure Requirements) Regulations, 2015. The full set of audited financial results for the quarter and year ended March 31,2025 are available on the Stock Exchange Websites(www.nseindia.com and www.bseindia.com)and on the Company's Website:www.vbshilpa.com

2 The Board of directors of the Company has recommended a final dividend of Rs.1/-per equity share(face value of Re.1/-)for the Financial Year 2024-25 at its meeting held on May 26,2025.

3 The above results have been reviewed by the Audit Committee and approved by the Board of Director at its meeting held on 26 May, 2025

Date: 27.05.2025
Place Raichur

**For and on behalf of the Board of Directors**
Sd/-
Omprakash Inani
**Chairman**